ಕರ್ನಾಟಕ ವಿಧಾನ ಸಭೆ
ಹದಿನಾಲ್ಕನೇ ವಿಧಾನ ಸಭೆ
ಎಂಟನೇ ಅಧಿವೇಶನ

# ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2015

**(2015ರ ವಿಧಾನಸಭೆಯ ವಿಧೇಯಕ ಸಂಖ್ಯೆ – 21)**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ನ್ನು (2001ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2015 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.–** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ (2001ರ ಕರ್ನಾಟಕ ಅಧಿನಿಯಮ 29) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 3ನೇ ಪ್ರಕರಣದಲ್ಲಿ,–

(1) (1)ನೇ ಉಪಪ್ರಕರಣದ (ಎ) ಖಂಡದಲ್ಲಿ "ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ರಾಮನಗರ ಜಿಲ್ಲೆಗಳ" ಎಂಬ ಪದಗಳಿಗೆ "ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ವಿಜಯನಗರ, ಪದ್ಮನಾಭ ನಗರ, ಬೊಮ್ಮನಹಳ್ಳಿ, ಆನೇಕಲ್, ಬೆಂಗಳೂರು ದಕ್ಷಿಣ, ಯಶವಂತಪುರ, ರಾಜರಾಜೇಶ್ವರಿನಗರ, ದಾಸರಹಳ್ಳಿ, ಮಹಾಲಕ್ಷ್ಮಿ ಲೇ ಔಟ್ ಮತ್ತು ಗೋವಿಂದರಾಜನಗರ; ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ; ರಾಮನಗರ ಜಿಲ್ಲೆಯ ಮಾಗಡಿ, ರಾಮನಗರ, ಕನಕಪುರ ಮತ್ತು ಚನ್ನಪಟ್ಟಣ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(2) (1ಇ) ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"(1ಎಫ್) ಬೆಂಗಳೂರು ಸೆಂಟ್ರಲ್ ಕಾಲೇಜು ಕ್ಯಾಂಪಸ್‌ನಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರುವ ಮತ್ತು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರವನ್ನು ಒಳಗೊಂಡಿರುವ ಪ್ರದೇಶಗಳ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯೊಂದಿಗೆ ಸಂಯೋಜನೆಗೊಳಿಸುವ ವಿಶ್ವವಿದ್ಯಾನಿಲಯವಾಗಿ (affiliating university) "ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ" ವನ್ನು ಸ್ಥಾಪಿಸತಕ್ಕದ್ದು.

(1ಜಿ) ಜಂಗಮಕೋಟೆಯಲ್ಲಿ (ಶಿಡ್ಲಘಟ್ಟ ತಾಲ್ಲೂಕು) (ಕೋಲಾರ ಸ್ನಾತಕೋತ್ತರ ಕೇಂದ್ರದಲ್ಲಿ (P.G centre) ತಾತ್ಕಾಲಿಕ ಕ್ಯಾಂಪಸ್ ಕಛೇರಿ) ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರುವ ಮತ್ತು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಕೋಲಾರ ಜಿಲ್ಲೆಯ, ಶ್ರೀನಿವಾಸಪುರ, ಮುಳಬಾಗಿಲು, ಕೋಲಾರ ಚಿನ್ನದ ಗಣಿ (K.G.F), ಬಂಗಾರಪೇಟೆ, ಕೋಲಾರ, ಮಾಲೂರು ಮತ್ತು ಕೋಲಾರ ಸ್ನಾತಕೋತ್ತರ ಕೇಂದ್ರ (P.G centre); ಬೆಂಗಳೂರು ಜಿಲ್ಲೆಯ ಕೆ.ಆರ್.ಪುರಂ, ಪುಲಿಕೇಶಿನಗರ, ಸರ್ವಜ್ಞನಗರ, ಸಿ.ವಿ.ರಾಮನ್‌ನಗರ ಮತ್ತು ಮಹದೇವಪುರ; ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು, ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಶಿಡ್ಲಘಟ್ಟ ಮತ್ತು ಚಿಂತಾಮಣಿ; ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ, ದೊಡ್ಡಬಳ್ಳಾಪುರ ಮತ್ತು ಹೊಸಕೋಟೆಯ ಪ್ರದೇಶಗಳ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯೊಂದಿಗೆ ಸಂಯೋಜನೆಗೊಳಿಸುವ ವಿಶ್ವವಿದ್ಯಾನಿಲಯವಾಗಿ (affiliating university) "ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ" ವನ್ನು ಸ್ಥಾಪಿಸತಕ್ಕದ್ದು."

(3) (2)ನೇ ಉಪಪ್ರಕರಣದ (i)ನೇ ಖಂಡದಲ್ಲಿ "(1)ನೇ ಉಪಪ್ರಕರಣದಲ್ಲಿ ಅಥವಾ (1ಎ) ಉಪಪ್ರಕರಣದಲ್ಲಿ ಅಥವ (1ಬಿ) ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ" ಎಂಬ ಪದಗಳಿಗೆ "ಈ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

3. **5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದಲ್ಲಿ (5)ನೇ ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(6) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2015ನ್ನು ಜಾರಿಗೊಳಿಸುವುದಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರ ಇಲ್ಲಿರುವ ಕಾಲೇಜು ಅಥವಾ ಶೈಕ್ಷಣಿಕ ಸಂಸ್ಥೆಗಳು ಬೆಂಗಳೂರು ವಿಶ್ವವಿದ್ಯಾನಿಲಯದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂಬು ಭಾವಿಸತಕ್ಕದ್ದು ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಎಲ್ಲ ಅಂಥ ಕಾಲೇಜುಗಳು ಅಥವಾ ಶೈಕ್ಷಣಿಕ ಸಂಸ್ಥೆಗಳು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿವೆ ಎಂದು ಭಾವಿಸತಕ್ಕದ್ದು.

(7) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2015ನ್ನು ಜಾರಿಗೊಳಿಸುವುದಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಕೋಲಾರ ಜಿಲ್ಲೆಯ ಶ್ರೀನಿವಾಸಪುರ, ಮುಳಬಾಗಿಲು, ಕೋಲಾರ ಚಿನ್ನದ ಗಣಿ (K.G.F), ಬಂಗಾರ ಪೇಟೆ, ಕೋಲಾರ, ಮಾಲೂರು ಮತ್ತು ಕೋಲಾರ ಸ್ನಾತಕೋತ್ತರ ಕೇಂದ್ರ; ಬೆಂಗಳೂರು ಜಿಲ್ಲೆಯ ಕೆ.ಆರ್.ಪುರಂ, ಪುಲಿಕೇಶಿನಗರ, ಸರ್ವಜ್ಞನಗರ, ಸಿ.ವಿ.ರಾಮನ್ ನಗರ ಮತ್ತು ಮಹಾದೇವಪುರ; ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು, ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಶಿಡ್ಲಘಟ್ಟ ಮತ್ತು ಚಿಂತಾಮಣಿ; ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ, ದೊಡ್ಡಬಳ್ಳಾಪುರ ಮತ್ತು ಹೊಸಕೋಟೆ ಇಲ್ಲಿರುವ ಕಾಲೇಜು ಅಥವಾ ಶೈಕ್ಷಣಿಕ ಸಂಸ್ಥೆಗಳು ಬೆಂಗಳೂರು ವಿಶ್ವವಿದ್ಯಾಲಯದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು, ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು ಬೆಂಗಳೂರು ವಿಶ್ವವಿದ್ಯಾಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಎಲ್ಲ ಅಂಥ

ಕಾಲೇಜುಗಳು ಅಥವಾ ಶೈಕ್ಷಣಿಕ ಸಂಸ್ಥೆಗಳು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿವೆ ಎಂದು ಭಾವಿಸತಕ್ಕದ್ದು."

**4. 14ನೇ ಪ್ರಕರಣದ ತಿದ್ದುಪಡಿ.–** ಮೂಲ ಅಧಿನಿಯಮದ 14ನೇ ಪ್ರಕರಣದಲ್ಲಿ (4)ನೇ ಉಪಪ್ರಕರಣದ ಆರನೇ ಪರಂತುಕದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು."

**5. ವಿಶೇಷಾಧಿಕಾರಿಯ ಅಧಿಕಾರಗಳು.–** ಪ್ರಥಮ ಕುಲಪತಿಯನ್ನು ನೇಮಿಸುವವರೆಗೆ ಅನುಕ್ರಮವಾಗಿ ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾನಿಯಲದ ಸ್ಥಾಪನೆಗೆ ಕೈಗೊಳ್ಳುವ ಕ್ರಮಗಳ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಿಸಿದ ವಿಶೇಷಾಧಿಕಾರಿಯು, ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂತೆ ವಿಶ್ವವಿದ್ಯಾನಿಲಯದ ಮತ್ತು ಕುಲಪತಿಗಳ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

**6. ಪ್ರಥಮ ಕುಲಪತಿಯ ಕರ್ತವ್ಯಗಳು.–** (1) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2015 (ಇಲ್ಲಿ ಇನ್ನು ಮುಂದೆ ತಿದ್ದುಪಡಿ ಅಧಿನಿಯಮ ಎಂದು ಉಲ್ಲೇಖಿಸಿದೆ) ಜಾರಿಯಾದ ದಿನಾಂಕದಿಂದ ಆರು ತಿಂಗಳ ಅಥವಾ ಕುಲಾಧಿಪತಿಯು ನಿರ್ದೇಶಿಸಬಹುದಾದ ಒಂದು ವರ್ಷಕ್ಕೂ ಮೀರದ ಅಂಥ ದೀರ್ಘಾವಧಿಯೊಳಗೆ ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯ ಅಥವಾ ಸಂದರ್ಭಾನುಸಾರವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಸಿಂಡಿಕೇಟ್, ವಿದ್ಯಾ ವಿಷಯಕ ಪರಿಷತ್ತು ಮತ್ತು ಇತರ ಪ್ರಾಧಿಕಾರಗಳನ್ನು ರಚಿಸುವುದಕ್ಕಾಗಿ ವ್ಯವಸ್ಥೆಗಳನ್ನು ಮಾಡುವುದು ಪ್ರಥಮ ಕುಲಪತಿಯ ಕರ್ತವ್ಯವಾಗಿರತಕ್ಕದ್ದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ರಚಿಸಲಾದ ಪ್ರಾಧಿಕಾರಗಳು, ಈ ಬಗ್ಗೆ ಕುಲಾಧಿಪತಿಯವರು ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಅವುಗಳ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನಿರ್ವಹಿಸಲು ಪ್ರಾರಂಭಿಸತಕ್ಕದ್ದು.

**7. ತಾತ್ಕಾಲಿಕ ಉಪಬಂಧಗಳು.–** ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಪ್ರಥಮ ಕುಲಪತಿಯವರು ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ, ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಯದ ಅಥವಾ ಸಂದರ್ಭಾನುಸಾರವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಎಲ್ಲಾ ಅಥವಾ ಯಾವುದೇ ಪ್ರಕಾರ್ಯಗಳನ್ನು ನಿರ್ವಹಿಸಬಹುದು ಮತ್ತು ಆ ಉದ್ದೇಶಕ್ಕಾಗಿ, ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಮೂಲಕ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರವು ಚಲಾಯಿಸಬೇಕಾದ ಅಥವಾ ನಿರ್ವಹಿಸಬೇಕಾದ ಯಾವುದೇ ಅಧಿಕಾರಗಳನ್ನು ಅಥವಾ ಕರ್ತವ್ಯಗಳನ್ನು ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದಲ್ಲಿ ಉಪಬಂಧಿಸಿದಂತೆ ಅಂಥ ಪ್ರಾಧಿಕಾರವು ಅಸ್ತಿತ್ವಕ್ಕೆ ಬರುವವರೆಗೆ ಚಲಾಯಿಸಬಹುದು ಅಥವಾ ನೆರವೇರಿಸಬಹುದು.

F-2 ಶಾಸ 44

(2) ಮೂಲ ಅಧಿನಿಯಮದ 5ನೇ ಪ್ರಕರಣದ ಅಡಿಯಲ್ಲಿ ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಯಲಕ್ಕೆ ಅಥವಾ ಸಂದರ್ಭಾನುಸಾರವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿಸಲಾದ ಸಂಯೋಜಿತ ಕಾಲೇಜುಗಳಿಗೆ ಅಥವಾ ಇತರ ಶಿಕ್ಷಣ ಸಂಸ್ಥೆಗಳಿಗೆ ಅನ್ವಯವಾಗತಕ್ಕ, ಬೆಂಗಳೂರು ವಿಶ್ವವಿದ್ಯಾನಿಲಯವು ರಚಿಸಿದ ಎಲ್ಲ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳನ್ನು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಯಲಯವು ಅಥವಾ ಸಂದರ್ಭಾನುಸಾರವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯವು ರಚಿಸಿದ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳೆಂದು ಭಾವಿಸತಕ್ಕದ್ದು ಮತ್ತು ಅವು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಯಲಯವು ಅಥವಾ ಸಂದರ್ಭಾನುಸಾರವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯವು ತನ್ನದೇ ಆದ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳನ್ನು ರಚಿಸುವವರೆಗೆ ಹಾಗೆಯೇ ಮುಂದುವರಿಯತಕ್ಕದ್ದು:

ಪರಂತು, ಕುಲಪತಿಯವರು, ಕುಲಾಧಿಪತಿಯವರ ಅನುಮೋದನೆಯೊಂದಿಗೆ, ತಾವು ಅವಶ್ಯಕವೆಂದು ಪರಿಗಣಿಸಬಹುದಾದಂಥ ಮಾರ್ಪಾಡುಗಳನ್ನು ಅಥವಾ ಅಳವಡಿಕೆಗಳನ್ನು ಅದರಲ್ಲಿ ಮಾಡಬಹುದು.

**8. ಕೆಲವು ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಉಳಿಸುವಿಕೆ.–** ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದಲ್ಲಿ ಅಥವಾ ತಿದ್ದುಪಡಿ ಅಧಿನಿಯಮವು ಜಾರಿಗೆ ಬರುವ ನಿಕಟಪೂರ್ವದಲ್ಲಿ ಅದರ ಅಡಿಯಲ್ಲಿ ರಚಿಸಿದ ಪರಿನಿಯಮಗಳಲ್ಲಿ, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳಲ್ಲಿ ಏನೇ ಇದ್ದರೂ,–

(ಎ) ಜಾರಿಯಲ್ಲಿದ್ದ ಪರಿನಿಯಮಗಳಿಗೆ, ಆರ್ಡಿನೆನ್ಸ್‌ಗಳಿಗೆ, ವಿನಿಯಮಗಳಿಗೆ ಮತ್ತು ನಿಯಮಗಳಿಗೆ ಅನುಸಾರವಾಗಿ, ಬೆಂಗಳೂರು ವಿಶ್ವವಿದ್ಯಾನಿಲಯದ ಪದವಿಗಾಗಿ ವ್ಯಾಸಂಗ ಮಾಡುತ್ತಿರುವ ಯಾವೊಬ್ಬ ವಿದ್ಯಾರ್ಥಿಯು, ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಯಲಯವು ಅಥವಾ ಸಂದರ್ಭಾನುಸಾರವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯವು ಅಂಥ ಪರೀಕ್ಷೆಯನ್ನು ವ್ಯವಸ್ಥೆಗೊಳಿಸುವವರೆಗೆ, ಬೆಂಗಳೂರು ವಿಶ್ವವಿದ್ಯಾನಿಲಯದ ಪರೀಕ್ಷೆಗೆ ಪ್ರವೇಶ ನೀಡತಕ್ಕದ್ದು ಮತ್ತು ಅಂಥ ಪರೀಕ್ಷೆಯ ಫಲಿತಾಂಶದ ಆಧಾರದ ಮೇಲೆ ಅವನು ಅರ್ಹನಾಗುವ ಪದವಿ ಅಥವಾ ಡಿಪ್ಲೋಮಾವನ್ನು ಅವನಿಗೆ ಪ್ರದಾನ ಮಾಡತಕ್ಕದ್ದು.

(ಬಿ) ಬೆಂಗಳೂರು ವಿಶ್ವವಿದ್ಯಾನಿಲಯವು ಯಾವುದೇ ಪರೀಕ್ಷೆಯನ್ನು ನಡೆಸಿ ಅದರ ಫಲಿತಾಂಶವು ಪ್ರಕಟಿಸಿದ್ದು ಆದರೆ, ಅದಕ್ಕೆ ಸಂಬಂಧಪಟ್ಟ ಪದವಿ ಅಥವಾ ಡಿಪ್ಲೋಮಾವನ್ನು ಪ್ರದಾನ ಮಾಡಿರದಿದ್ದರೆ ಅಥವಾ ನೀಡಿರದಿದ್ದರೆ ಅಥವಾ ಯಾವುದೇ ಅಂಥ ಪರೀಕ್ಷೆಯ ಫಲಿತಾಂಶವನ್ನು ಬೆಂಗಳೂರು ವಿಶ್ವವಿದ್ಯಾನಿಲಯವು ಪ್ರಕಟಿಸಿರದಿದ್ದರೆ, ಆಗ ಅಂಥ ಪರೀಕ್ಷೆಯನ್ನು ಬೆಂಗಳೂರು ವಿಶ್ವವಿದ್ಯಾನಿಲಯವೇ ನಡೆಸಿದೆ ಎಂದು ಭಾವಿಸತಕ್ಕದ್ದು.

**9. ತೊಂದರೆಗಳ ನಿವಾರಣೆ.–** ತಿದ್ದುಪಡಿ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ, ತೊಂದರೆಯನ್ನು ನಿವಾರಿಸುವ ಉದ್ದೇಶಕ್ಕಾಗಿ ಅವಶ್ಯವೆಂದು ಅಥವಾ ಯುಕ್ತವೆಂದು ತನಗೆ ಕಂಡುಬರಬಹುದಾದಂಥ ಉಪಬಂಧಗಳನ್ನು ರಚಿಸಬಹುದು;

ಪರಂತು, ತಿದ್ದುಪಡಿ ಅಧಿನಿಯಮವು ಜಾರಿಯಾದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ ಅಂಥ ಯಾವ ಆದೇಶವನ್ನೂ ಮಾಡತಕ್ಕದ್ದಲ್ಲ.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಬೆಂಗಳೂರು ವಿಶ್ವವಿದ್ಯಾನಿಯಲಯದ ಆಡಳಿತ ಮತ್ತು ಕಾರ್ಯನಿರ್ವಹಣೆಯಲ್ಲಿ ಸುಧಾರಣೆಗಳನ್ನು ತರುವುದಕ್ಕೆ ಹಾಗೂ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಲು ಅದನ್ನು ಈ ಮುಂದಿನಂತೆ ತ್ರಿಭಜಿಸುವುದಕ್ಕಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2000ನ್ನು (2001ರ ಕರ್ನಾಟಕ ಅಧಿನಿಯಮ 29) ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ, ಎಂದರೆ:–

(i) ಬೆಂಗಳೂರು ವಿಶ್ವವಿದ್ಯಾನಿಯಲಯವು ಜ್ಞಾನಭಾರತಿಯಲ್ಲಿನ ಕ್ಯಾಂಪಸ್ಸಿನೊಂದಿಗೆ ಮತ್ತು ಕರ್ನಾಟಕ ವಿಧಾನ ಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ವಿಜಯನಗರ, ಪದ್ಮನಾಭನಗರ, ಬೊಮ್ಮನಹಳ್ಳಿ, ಆನೇಕಲ್, ಬೆಂಗಳೂರು ದಕ್ಷಿಣ, ಯಶವಂತಪುರ, ರಾಜರಾಜೇಶ್ವರಿನಗರ, ದಾಸರಹಳ್ಳಿ, ಮಹಾಲಕ್ಷ್ಮಿ ಲೇಔಟ್, ಮತ್ತು ಗೋವಿಂದರಾಜನಗರ; ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ; ಹಾಗೂ ರಾಮನಗರ ಜಿಲ್ಲೆಯ ಮಾಗಡಿ, ರಾಮನಗರ, ಕನಕಪುರ ಮತ್ತು ಚನ್ನಪಟ್ಟಣ ಪ್ರದೇಶಗಳಲ್ಲಿ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಮುಂದುವರೆಸತಕ್ಕದ್ದು.

(ii) "ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯ" ಎಂಬ ಹೊಸ ವಿಶ್ವವಿದ್ಯಾನಿಲಯವು, ಸಂಯೋಜನೆಗೊಳಿಸುವ ವಿಶ್ವವಿದ್ಯಾನಿಲಯವಾಗಿ (affiliating university) ಬೆಂಗಳೂರು ಸೆಂಟ್ರಲ್ ಕಾಲೇಜು ಕ್ಯಾಂಪಸ್ಸಿನಲ್ಲಿ ಕೇಂದ್ರ ಕಾರ್ಯಸ್ಥಾನದೊಂದಿಗೆ ಮತ್ತು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರ ಪ್ರದೇಶಗಳಲ್ಲಿ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಒಳಗೊಂಡು ಸ್ಥಾಪನೆಯಾಗತಕ್ಕದ್ದು.

(iii) "ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ" ಎಂಬ ಹೊಸ ವಿಶ್ವವಿದ್ಯಾನಿಲಯವು ಸಂಯೋಜನೆಗೊಳಿಸುವ ವಿಶ್ವವಿದ್ಯಾನಿಲಯವಾಗಿ (affiliating university) ಜಂಗಮ ಕೋಟೆಯಲ್ಲಿ (ಶಿಡ್ಲಘಟ್ಟ ತಾಲ್ಲೂಕು) (ಕೋಲಾರ ಸ್ನಾತಕೋತ್ತರ ಕೇಂದ್ರದಲ್ಲಿ (P.G Centre) ತಾತ್ಕಾಲಿಕ ಕ್ಯಾಂಪಸ್ ಕಛೇರಿ) ಕೇಂದ್ರ ಕಾರ್ಯಸ್ಥಾನದೊಂದಿಗೆ ಮತ್ತು

ಕರ್ನಾಟಕ ವಿಧಾನ ಸಭಾ ಕ್ಷೇತ್ರಗಳಾದ ಕೋಲಾರ ಜಿಲ್ಲೆಯ ಶ್ರೀನಿವಾಸಪುರ, ಮುಳಬಾಗಿಲು, ಕೋಲಾರ ಚಿನ್ನದ ಗಣಿ (K.G.F), ಬಂಗಾರ ಪೇಟೆ, ಕೋಲಾರ, ಮಾಲೂರು ಮತ್ತು ಕೋಲಾರ ಸ್ನಾತಕೋತ್ತರ ಕೇಂದ್ರ (P.G Centre); ಬೆಂಗಳೂರು ಜಿಲ್ಲೆಯ ಕೆ.ಆರ್.ಪುರಂ, ಪುಲಿಕೇಶಿನಗರ, ಸರ್ವಜ್ಞನಗರ, ಸಿ.ವಿ.ರಾಮನ್ ನಗರ ಮತ್ತು ಮಹಾದೇವಪುರ; ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು, ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಶಿಡ್ಲಘಟ್ಟ ಮತ್ತು ಚಿಂತಾಮಣಿ; ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ, ದೊಡ್ಡಬಳ್ಳಾಪುರ ಮತ್ತು ಹೊಸಕೋಟೆ ಪ್ರದೇಶಗಳಲ್ಲಿ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಒಳಗೊಂಡು ಸ್ಥಾಪನೆಯಾಗತಕ್ಕದ್ದು; ಮತ್ತು

(iv) ಕೆಲವು ಅನುಷಂಗಿಕ ತಿದ್ದುಪಡಿಗಳನ್ನೂ ಸಹ ಮಾಡಲಾಗಿದೆ.

ಆದ್ದರಿಂದ ಈ ವಿಧೇಯಕ

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ವಾರ್ಷಿಕವಾಗಿ ಸುಮಾರು 10 ಕೋಟಿ ರೂಪಾಯಿಗಳಷ್ಟು ಆವರ್ತಕ ವೆಚ್ಚ ಉಂಟಾಗುತ್ತದೆ.

**ಆರ್.ವಿ. ದೇಶಪಾಂಡೆ**
ಉನ್ನತ ಶಿಕ್ಷಣ ಸಚಿವರು

**ಎಂ. ಗುರುರಾಜ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ

## ಅನುಬಂಧ

### ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ (2001ರ ಕರ್ನಾಟಕ ಅಧಿನಿಯಮ 29) ಉದ್ಧೃತ ಭಾಗ

Xx xx xx

**3. ವಿಶ್ವವಿದ್ಯಾನಿಲಯಗಳ ಸ್ಥಾಪನೆ ಮತ್ತು ನಿಗಮನ.-** Xx xx xx

(ಎ) ಬೆಂಗಳೂರಿನಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿದ ಮತ್ತು ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ರಾಮನಗರ ಜಿಲ್ಲೆಗಳ ಪ್ರದೇಶದ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಬೆಂಗಳೂರು ವಿಶ್ವವಿದ್ಯಾನಿಲಯ;

Xx xx xx

(2) (i) ಪ್ರತಿಯೊಂದು ವಿಶ್ವವಿದ್ಯಾನಿಲಯದ ಕುಲಾಧಿಪತಿ, ಸಹ-ಕುಲಾಧಿಪತಿ (ಪ್ರೊಚಾನ್ಸಲರ್), ಕುಲಪತಿ ಮತ್ತು ವಿದ್ಯಾವಿಷಯಕ ಪರಿಷತ್ತು ಮತ್ತು ಸಿಂಡಿಕೇಟಿನ ಸದಸ್ಯರು, (1)ನೇ ಉಪ ಪ್ರಕರಣದಲ್ಲಿ ಅಥವಾ (1ಎ) ಉಪಪ್ರಕರಣದಲ್ಲಿ ಅಥವಾ (1ಬಿ) ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಆ ವಿಶ್ವವಿದ್ಯಾನಿಲಯದ ಹೆಸರಿನಿಂದ ಕರೆಯಲ್ಪಡುವ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು;

Xx xx xx

**ಕಾ.ಸೂ. 44-ಸ.ವಿ.ಮು.ಧಾ ಬಿಲ್ 21 -750 ಪ್ರತಿಗಳು ಜೂನ್ 2015**

KARNATAKA LEGISLATIVE ASSEMBLY
FOURTEENTH LEGISLATIVE ASSEMBLY
EIGHTH SESSION

# THE KARNATAKA STATE UNIVERSITIES (AMENDMENT) BILL, 2015
## (L.A. Bill No. 21 of 2015)

A Bill further to amend the Karnataka State Universities Act, 2000.

Whereas it is expedient further to amend the Karnataka State Universities Act, 2000 (Karnataka Act 29 of 2001) for the purposes hereinafter appearing:

Be it enacted by the Karnataka State Legislature in the sixty-sixth year of the Republic of India as follows:-

**1. Short title and Commencement.-** (1) This Act may be called the Karnataka State Universities (Amendment) Act, 2015.

(2) It shall come into force at once.

**2. Amendment of Section 3.-** In the Karnataka State Universities Act, 2000 (Karnataka Act 29 of 2001) (hereinafter referred to as the principal Act), in section 3,-

(1)In sub-section (1), in clause (a), for the words "the districts of Bangalore, Bangalore Rural, Kolar, Chikkaballapur, and Ramanagara", the words "the Karnataka Legislative Assembly Constituencies of Vijayanagara, Padmanabhanagar, Bommanahalli, Anekal, Bangalore South, Yeshvanthpura, Rajarajeshwarinagar, Dasarahalli, MahalaxmiLayout and Govindarajnagar of Bangalore District, Nelamangala of Bangalore Rural District, Magadi, Ramanagara, Kanakapura and Channapatna of Ramanagara District" shall be substituted.

(2) After sub-section (1E), the following shall be inserted, namely:-

"(1F) There shall be established the "Bangalore Central University, as an affiliating University with headquarters at Bangalore Central College Campus with territorial jurisdiction comprising of the Karnataka Legislative Assembly Constituencies of Shanthinagar, Byatarayanapura, Yelahanka, Malleshwaram, Hebbal, Shivajinagar, Gandhinagar, Chamarajpet, Chickpet, Basavangudi, BTM Layout, Jayanagar and Rajajinagar of Bangalore District.

(1G) There shall be established the "Bangalore North University, as an affiliating University with headquarters at Jangamakote (Sidalaghatta Taluk) (temporary Camp Office at Kolar P G Centre) with territorial jurisdiction comprising of the Karnataka Legislative Assembly Constituencies of Srinivaspura, Mulbagal, Kolar Gold Field, Bangarapet, Kolar, Malur and Kolar PG centre of Kolar District; K.R.Puram, Pulakeshinagar, Sarvagnanagar, C V Raman Nagar and Mahadevpura of Bangalore District; Gowribidanur, Bagepalli, Chikkaballapur, Sidalaghatta and Chintamani of Chikkaballapur District; Devanahalli, Doddaballapura and Hoskote of Bangalore Rural District".

(3) In sub-section (2), in clause (i) for the words "specified in sub-section (1) or sub-section (1A) or sub-section (1B)" the words "specified in this section" shall be substituted.

**3. Amendment of Section 5.–** In section 5 of the Principal Act, after sub-section (5), the following shall be inserted, namely:-

"(6) Any privilege enjoyed from the Bangalore University by the college or educational institutions situated in the Karnataka Legislative Assembly Constituencies of Shanthinagar, Byatarayanapura, Yelahanka, Malleshwaram, Hebbal, Shivajinagar, Gandhinagar, Chamarajpet, Chickpet, Basavangudi, BTM Layout, Jayanagar and Rajajinagar of Bangalore District before the commencement of the Karnataka State Universities (Amendment) Act, 2015 shall with effect from such date as may be specified by the State Government in this behalf, be deemed to be withdrawn and all such colleges or educational institutions previously admitted to the privileges of, or affiliated to Bangalore University shall be deemed to be admitted to the privilege of, or affiliated, to the Bangalore Central University.

(7) Any privilege enjoyed from the Bangalore University by the college or educational institutions situated in the Karnataka Legislative Assembly Constituencies of Srinivaspura, Mulbagal, Kolar Gold Field, Bangarapet, Kolar, Malur and Kolar PG centre of Kolar District; K.R.Puram, Pulakeshinagar, Sarvagnanagar, C V Raman Nagar and Mahadevpura of Bangalore District; Gowribidanur, Bagepalli, Chikkaballapur, Sidalaghatta and Chintamani of Chikkaballapur District; Devanahalli, Doddaballapura and Hoskote of Bangalore Rural District before the commencement of the Karnataka State Universities (Amendment) Act 2015 shall with effect from such date as may be specified by the State Government in this behalf, be deemed to be withdrawn and all such colleges or educational institutions previously admitted to the privileges of, or affiliated to Bangalore University shall be deemed to be admitted to the privilege of, or affiliated, to the Bangalore North University,"

**4. Amendment of section 14.-** In section 14 of the Principal Act, in sub-section (4), after the sixth proviso the following shall be inserted, namely:-

"Provided also that notwithstanding anything contrary contained in this section, first Vice-Chancellors of the Bangalore Central University and Bangalore North University shall be appointed by the State Government subject to such terms and conditions as may be specified by it".

**5. Powers of Special officer.–** The special Officer appointed by the State Government for the purpose of taking steps to establish the Bangalore Central University or the Bangalore North University respectively shall exercise such of the powers and perform such of the functions of the University and the Vice-Chancellors as may be specified by the State Government, until the first Vice-Chancellor is appointed.

**6. Duties of the first Vice-Chancellor.–** (1) It shall be the duty of the first Vice-Chancellor, to make arrangements for constituting the Syndicate, Academic Council and other authorities of the Bangalore Central University or the Bangalore North University as the case may be within six months from the date of commencement of the Karnataka State Universities

(Amendment) Act, 2015 (hereinafter referred to as the Amendment Act) or such longer period not exceeding one year as the Chancellor may direct.

(2) The Authorities constituted under sub-section (1) shall commence to exercise, their powers and perform their functions on such date as the Chancellor may specify in this behalf.

**7. Transitory provisions.-** (1) Notwithstanding anything contained in the principal Act as amended by the Amendment Act the first Vice-Chancellors may, with the previous approval of the Chancellor, discharge all or any of the functions of the Bangalore Central University or the Bangalore North University as the case may be for the purpose of carrying out the provisions of the Principal Act as amended by the Amendment Act and for that purpose may exercise any power or perform any duty which by the Principal Act as amendment by the Amendment Act is to be exercised or performed by any Authority of the University until such Authority comes into existence as provided by the Principal Act as amended by the Amendment Act.

(2) All Statutes, ordinances, regulations and rules made by the Bangalore University applicable to the affiliated colleges or other educational institutions which are deemed to be affiliated to the Bangalore Central University or the Bangalore North University as the case may be under section 5 of the principal Act shall be deemed to be the statutes, ordinances, regulations and rules made by the Bangalore Central University or the Bangalore North University as the may be and shall continue as such till the Bangalore Central University or the Bangalore North University respectively makes its own Statutes ordinance, regulations and rules.

Provided that the Vice-Chancellor may with the approval of the Chancellor make such modification and adaptations therein as he may consider necessary.

**8. Savings of certain examination.-** Notwithstanding anything contained in the principal Act as amended by the Amendment Act or the statutes, ordinances, regulations and rules made there under, where immediately before the commencement of the amendment Act.

(a) any student studying for a degree of the Bangalore University in accordance with the statutes, ordinances, regulations and rules in force he may until such examination is provided by the Bangalore Central University or the Bangalore North University as the case may be, be admitted to the examination of the Bangalore University and be conferred with the degrees or diplomas for which he qualifies on the result of such examination.

(b) the Bangalore University has held any examination, the result of which has been published but the degrees, or diplomas relating there to have not been conferred or issued or the result of any such examination has not been published by the Bangalore University, then such examination shall be deemed to have been held by the Bangalore University.

**9. Removal of difficulties.-** If any difficulty arises in giving effect to the provisions of the Amendment Act, the State Government may, by order published in the Official Gazettes, make such provision as may appear to it necessary or expedient for the purposes of removing the difficulty:-

Provided that no such other orders shall be made after the expiry of the period of two years from the date of commencement of the Amendment Act.

## STATEMENT OF OBJECTS AND REASON

It is considered necessary to amend the Karnataka State Universities Act, 2000 (Karnataka Act 29 of 2001), to bring reforms in the governance and administration of the Bangalore University and improve academic quality by Trifurcating it into,-

(i) "The Bangalore University" to continue with campus at Gnanabharathi having jurisdiction over the areas of the Karnataka Legislative Assembly Constituencies of Vijayanagara, Padmanabhanagar, Bommanahalli, Anekal, Bangalore South, Yeshvanthpura, Rajarajeshwarinagar, Dasarahalli, MahalaxmiLayout and Govindarajnagar of Bangalore District, Nelamangala of Bangalore Rural District, Magadi, Ramanagara, Kanakapura and Channapatna of Ramanagara District;

(ii) The new University called " Bangalore Central University" which will be established as an affiliating University with headquarters at Bangalore Central College Campus with territorial jurisdiction over the areas of the Karnataka Legislative Assembly Constituencies of Shanthinagar, Byatarayanapura, Yelahanka, Malleshwaram, Hebbal, Shivajinagar, Gandhinagar, Chamarajpet, Chickpet, Basavangudi, BTM Layout, Jayanagar and Rajajinagar of Bangalore District; and

(iii) The new University called "Bangalore North University, which be established as an affiliating University with headquarters at Jangamakote (Sidalaghatta Taluk) (temporary Camp Office at Kolar P G Centre) with territorial jurisdiction over the areas of the Karnataka Legislative Assembly Constituencies of Srinivaspura, Mulbagal, Kolar Gold Field, Bangarapet, Kolar, Malur and Kolar PG centre of Kolar District; K.R.Puram, Pulakeshinagar, Sarvagnanagar, C V Raman Nagar and Mahadevpura of Bangalore District; Gowribidanur, Bagepalli, Chikkaballapur, Sidalaghatta and Chintamani of Chikkaballapur District; Devanahalli, Doddaballapura and Hoskote of Bangalore Rural District; and

(iv) Certain consequential amendments are also made.

Hence, the Bill.

**FINANCIAL MEMORANDUM**

There will be recurring approximate expenditure of Rs.10 crores per annum by the proposed legislative measure.

**R.V.DESHPANDE**
MINISTER FOR HIGHER EDUCATION

**M. GURURAJA**
Secretary
Karnataka Legislative Assembly

**ANNEXURE**

**EXTRACT FROM THE KARNATAKA STATE UNIVERSITIES ACT, 2000 (KARNATAKA ACT 29 OF 2001)**

**XX XX XX**

**3. Establishment and Incorporation of Universities.- XX XX**

(a) The Bangalore University with headquarters at Bangalore and territorial jurisdiction extending over 1[the districts of Bangalore, Bangalore Rural, Kolar, Chikkaballapur and Ramanagara.

**XX XX XX**

(2) (i)The Chancellor, the Pro-Chancellor, the Vice Chancellor and the members of the Academic Council and Syndicate of each University shall constitute a body corporate to be called by the name of that University specified in sub-section (1) or sub-section (1A) or sub-section (1B)

**XX XX XX**

WD. 44-G.D.P.D. Bill-21 -750 Copies- June 2015